All India Radio: Bangalore
Regional Bulletin In Kannada
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

31.07.2025 6.40 P.M.

<><><><>

ಮುಖ್ಯಾಂಶಗಳು

- ರಸಗೊಬ್ಬರ ಕಾಳಸಂತೆಕೋರರ ವಿರುದ್ಧ ಕಠಿಣಕ್ರಮ ಕೈಗೊಳ್ಳುವಂತೆ ಪೊಲೀಸ್ ಮಹಾನಿರ್ದೇಶಕರಿಗೆ ಮುಖ್ಯಮಂತ್ರಿ ಸೂಚನೆ

- ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ ಕೌನ್ಸೆಲಿಂಗ್ ಮೂಲಕ ೧ ಸಾವಿರದ ೩೦೦ ನೌಕರರ ವರ್ಗಾವಣೆ - ಸಚಿವ ಪ್ರಿಯಾಂಕ್ ಖರ್ಗೆ

- ಧರ್ಮಸ್ಥಳ ಪ್ರಕರಣ ; ಎಸ್ಐಟಿ ತನಿಖೆ ಚುರುಕು - ೬ನೇ ಸ್ಥಳದಲ್ಲಿ ಮೂಳೆಗಳು ಪತ್ತೆ

- ಕ್ಷೇತ್ರದ ಜನರ ಸಮಸ್ಯೆ ಆಲಿಸಲು ಮೇಲುಕೋಟೆ ಶಾಸಕ ದರ್ಶನ್ ಪುಟ್ಟಣಯ್ಯ ಆಪ್ ಮೂಲಕ ವಿನೂತನ ಪ್ರಯತ್ನ

- ಪರಿಶಿಷ್ಟ ಸಮುದಾಯದವರ ಒಳಮೀಸಲಾತಿಗೆ ಆಗ್ರಹಿಸಿ ನಾಳೆ ಬೆಂಗಳೂರಿನಲ್ಲಿ ಪ್ರತಿಭಟನೆ

<><><><>

ಕೇಂದ್ರ ಸರ್ಕಾರ ರಾಜ್ಯಕ್ಕೆ ಅಗತ್ಯ ರಸಗೊಬ್ಬರ ಸರಬರಾಜು ಮಾಡಿಲ್ಲ. ಈ ನಡುವೆ ರಾಜ್ಯದಲ್ಲಿ ರಸಗೊಬ್ಬರ ಕಾಳಸಂತೆಕೋರರು ತಲೆ ಎತ್ತದಂತೆ ತೀವ್ರ ನಿಗಾವಹಿಸಲು ಪೊಲೀಸ್ ಮಹಾನಿರ್ದೇಶಕರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ.

ಕೇಂದ್ರದ ಅಸಹಕಾರದ ನಡುವೆಯೂ ರೈತರಿಗೆ ಅನಾನುಕೂಲವಾಗದಂತೆ ಅಗತ್ಯಕ್ರಮ ಕೈಗೊಳ್ಳುತ್ತಿದೆ. ಆದರೆ ಕೆಲವರು ರಸಗೊಬ್ಬರಕ್ಕೆ ಕೃತಕ ಅಭಾವ ಸೃಷ್ಟಿಸಿ, ಲಾಭ ಪಡೆದುಕೊಳ್ಳಲು ಯತ್ನಿಸುತ್ತಿದ್ದಾರೆ.

ಯಾವುದೇ ಜಿಲ್ಲೆ, ತಾಲೂಕು, ಹೋಬಳಿ ಸೇರಿದಂತೆ ಎಲ್ಲೂ ರಸಗೊಬ್ಬರಕ್ಕೆ ಕೃತಕ ಅಭಾವ ಸೃಷ್ಟಿಯಾಗಬಾರದು ಎಂದು ದೂರವಾಣಿ ಮೂಲಕ ನಿರ್ದೇಶನ ನೀಡಿದ್ದಾರೆ.

<><><><>

ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿಗೆ ಗದಗ ಜಿಲ್ಲೆಗೆ ಜುಲೈ ೨೦೨೫ ಅಂತ್ಯಕ್ಕೆ ೧೭ ಸಾವಿರದ ೭೭೮ ಮೆಟ್ರಿಕ ಟನ್  ಪ್ರಮಾಣದ ಯೂರಿಯಾ ರಸಗೊಬ್ಬರದ ಬೇಡಿಕೆ ಇದ್ದು, ಇಲ್ಲಿಯವರೆಗೆ ೨೧ ಸಾವಿರ ೬೪೭ ಮೆಟ್ರಿಕ್ ಟನ್ ಯೂರಿಯಾ ರಸಗೊಬ್ಬರವನ್ನು ಜಿಲ್ಲೆಗೆ ಪೂರೈಸಲಾಗಿದೆ ಎಂದು ಗದಗ ಜಿಲ್ಲಾ ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ತಾರಾಮಣಿ ಜಿ ಎಚ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇನ್ನೊಂದೆಡೆ ಕೇಂದ್ರ ಸರ್ಕಾರ ಪೂರೈಕೆ ಮಾಡಿರುವ ರಸಗೊಬ್ಬರವನ್ನು ರಾಜ್ಯದ ರೈತರಿಗೆ ಸರಿಯಾದ ಸಮಯದಲ್ಲಿ ಪೂರೈಸದೆ ರಾಜ್ಯ ಸರ್ಕಾರ ಅನ್ಯಾಯ ಮಾಡುತ್ತಿದೆಂದು ಬಿಜೆಪಿಯ ರೈತ ಮೋರ್ಚಾ ಕೊಪ್ಪಳದಲ್ಲಿ ಪ್ರತಿಭಟನೆ ನಡೆಸಿತು.

ಮುಖ್ಯಮಂತ್ರಿ ಸಿದ್ದರಾಮಯ್ಯನವರು ಶ್ವೇತ ಪತ್ರ ಹೊರಡಿಸುವ ಮೂಲಕ ರಾಜ್ಯಕ್ಕೆ ಕೇಂದ್ರ ಸರ್ಕಾರ ಸರಬರಾಜು ಮಾಡಿರುವ ರಸಗೊಬ್ಬರ ಮತ್ತು ಯೂರಿಯಾದ ಬಗ್ಗೆ ಶ್ವೇತ ಪತ್ರ ನೀಡಬೇಕು ಎಂದು ಗಂಗಾವತಿ ಶಾಸಕ ಜನಾರ್ಧನರಡ್ಡಿ ಒತ್ತಾಯಿಸಿದ್ದಾರೆ.

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಕೂಡ ಜಿಲ್ಲಾಉಸ್ತುವಾರಿ ಸಚಿವರು ಹಾಗೂ ಸಚಿವರು ಶಾಸಕರೊಂದಿಗೆ ಸಭೆ ನಡೆಸಿದರು. ವಿಜಯಪುರ, ಬಾಗಲಕೋಟೆ, ಗದಗ, ಹಾವೇರಿ ಹಾಗೂ ಶಿವಮೊಗ್ಗ ಜಿಲ್ಲೆಗಳ ಜನಪ್ರತಿನಿಧಿಗಳೊಂದಿಗೆ ಸಭೆ ನಡೆಸಿ ಕ್ಷೇತ್ರದ ಅಭಿವೃದ್ಧಿ ಕುರಿತಂತೆ ಮಾಹಿತಿ ಪಡೆದುಕೊಂಡರು.

ಮಧ್ಯಾಹ್ನ ಬಳಿಕ, ದಾವಣಗೆರೆ, ಚಿತ್ರದುರ್ಗ, ಚಿಕ್ಕಮಗಳೂರು, ಚಿಕ್ಕಬಳ್ಳಾಪುರ ಜನಪ್ರತಿನಿಧಿಗಳೊಂದಿಗೆ ಸಭೆ ನಡೆಸಿ ಅಭಿವೃದ್ಧಿ ಯೋಜನೆಗಳ ಅನುಷ್ಠಾನಕ್ಕೆ ಸಲಹೆ-ಸೂಚನೆ ನೀಡಿದ್ದಾರೆ.

<><><><>

ಬಜೆಟ್‌ನಲ್ಲಿ ಘೋಷಿಸಿದಂತೆ ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ ಇದೇ ಮೊದಲ ಬಾರಿಗೆ ಕೌನ್ಸಲಿಂಗ್ ಮೂಲಕ ೧ ಸಾವಿರದ ೩೦೦ ನೌಕರರನ್ನು ವರ್ಗಾವಣೆ ಮಾಡಲಾಗಿದೆ ಎಂದು ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಮಾತನಾಡಿದ ಅವರು, ರಾಜ್ಯದ ೩೧ ಜಿಲ್ಲೆಗಳಲ್ಲಿ ಗ್ರಾಮಪಂಚಾಯಿತಿಗಳ ಕಾರ್ಯದರ್ಶಿ ಗ್ರೇಡ್-೧ ಮತ್ತು ಗ್ರೇಡ್ ೨ ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ವರ್ಗಾವಣೆ ಪ್ರಕ್ರಿಯೆಯನ್ನು ಆನ್ಲೈನ್ ಕೌನ್ಸಲಿಂಗ್ ಮೂಲಕ ಕೈಗೊಂಡು ಯಶಸ್ವಿಯಾಗಿ ಪೂರ್ಣಗೊಳಿಸಲಾಗಿದೆ ಎಂದು ಹೇಳಿದ್ದಾರೆ. ಒಟ್ಟು ೨ ಸಾವಿರದ ೬೯೭ ನೌಕರರಿಂದ

ವರ್ಗಾವಣೆಗಾಗಿ ಅರ್ಜಿಗಳು ಸ್ವೀಕೃತಿಯಾಗಿದ್ದವು. ಇವುಗಳನ್ನು ಪರಿಶೀಲಿಸಿ ಅರ್ಹತೆ ಹೊಂದಿದ ನೌಕರರನ್ನು ಮಾತ್ರ ವರ್ಗಾವಣೆ ಮಾಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ದಕ್ಷಿಣಕನ್ನಡ ಜಿಲ್ಲೆಯ ಧರ್ಮಸ್ಥಳ ಗ್ರಾಮದಲ್ಲಿ ಮೃತದೇಹಗಳನ್ನು ಹೂತು ಹಾಕಲಾಗಿದೆ ಎನ್ನುವ ಪ್ರಕರಣದ ಎಸ್‌ಐಟಿ ತಂಡದ ತನಿಖೆ ಮತ್ತಷ್ಟು ಚುರುಕುಪಡೆದಿದೆ.

ಶವ ಶೋಧ ಕಾರ್ಯ ಆರಂಭಗೊಂಡ ಮೂರನೇ ದಿನವಾದ ಇಂದು ದೂರುದಾರ ತೋರಿಸಿದ ಆರನೇ ಸ್ಥಳದಲ್ಲಿ ಉತ್ಖನನ ಕಾರ್ಯ ನಡೆದಿದೆ. ಈ ಪ್ರದೇಶದಲ್ಲಿ ಮೂಳೆಗಳು ಪತ್ತೆಯಾಗಿವೆ.

ಕಳೆದ ಎರಡು ದಿನಗಳಲ್ಲಿ ಐದು ಸ್ಥಳಗಳಲ್ಲಿ ಶೋಧ ಕಾರ್ಯ ನಡೆದಿದ್ದು. ಯಾವುದೇ ಕುರುಹು ಲಭ್ಯವಾಗಿರಲಿಲ್ಲ. ದೂರುದಾರ ತೋರಿಸಿದ ಎಲ್ಲಾ ಸ್ಥಳಗಳನ್ನು ತನಿಖಾ ತಂಡ ಗುರುತು ಮಾಡಿ ಇಟ್ಟಿದ್ದು, ಹಂತ ಹಂತವಾಗಿ ಶೋಧ ನಡೆಯುತ್ತಿದೆ. ಶೋಧ ಕಾರ್ಯ ನಡೆಯುವ ಸ್ಥಳದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗುತ್ತಿದೆ.

<><><><>

ಮಂಡ್ಯದಲ್ಲಿ ಸಾರ್ವಜನಿಕರ ಸಮಸ್ಯೆಗಳನ್ನು ಪರಿಹರಿಸಲು ಆಪ್ ಅಭಿವೃದ್ಧಿ ಪಡಿಸಲಾಗಿದ್ದು, ಜನರು ತಮ್ಮ ಸಮಸ್ಯೆಗಳನ್ನು ನಮೂದಿಸಿದರೆ ಸಂಬಂಧ ಪಟ್ಟ ಅಧಿಕಾರಿಗಳು ಪರಿಹರಿಸಲಿದ್ದಾರೆ ಎಂದು ಮೇಲುಕೋಟೆ ಕ್ಷೇತ್ರದ ಶಾಸಕ ದರ್ಶನ್ ಪುಟ್ಟಣ್ಣಯ್ಯ ತಿಳಿಸಿದ್ದಾರೆ.

ಮಂಡ್ಯ ತಾಲ್ಲೂಕಿನ ದುದ್ದ ಗ್ರಾಮ ಪಂಚಾಯಿತಿ ವತಿಯಿಂದ ಆಯೋಜಿಸಲಾಗಿದ್ದ "ಸರ್ಕಾರಿ ಕಚೇರಿಗಳಿಗೆ ನೀವು ಬರಬೇಡಿ ಕಚೇರಿಯೇ ನಿಮ್ಮ ಮನೆ ಬಾಗಿಲಿಗೆ ಬರಲಿದೆ" ಎಂಬ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮುಂದಿನ ದಿನಗಳಲ್ಲಿ ಸಾರ್ವಜನಿಕರು ಆಪ್ ಬಳಸಿ ತಮ್ಮ ಸಮಸ್ಯೆಗಳನ್ನು ನಮೂದಿಸಬಹುದಾಗಿದೆ ಎಂದು ಹೇಳಿದ್ದಾರೆ.

<><><><>

ರಾಜ್ಯದ ಸುಮಾರು ೨೮ ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ನಾಳೆ ಪರಿಶಿಷ್ಟ ಸಮುದಾಯದವರ ಒಳ ಮೀಸಲಾತಿಗೆ ಆಗ್ರಹಿಸಿ ಹೋರಾಟ ನಡೆಯಲಿದೆ ಎಂದು ಕೇಂದ್ರದ ಮಾಜಿ ಸಚಿವ ಎ.ನಾರಾಯಣಸ್ವಾಮಿ ತಿಳಿಸಿದ್ದಾರೆ.

ಸಂಘಟನೆಗಳ ಸಭೆ ನಡೆಸಿ ಎಲ್ಲ ಜಿಲ್ಲೆಗಳಲ್ಲಿ ಹೋರಾಟಕ್ಕೆ ಸಿದ್ಧತೆ ನಡೆದಿದೆ. ಈ ಹೋರಾಟದಲ್ಲಿ ವಿದ್ಯಾರ್ಥಿಗಳು ಸೇರಿದಂತೆ ಸಮುದಾಯದ ಜನರು ಭಾಗವಹಿಸಲಿದ್ದಾರೆ ಎಂದು ಹೇಳಿದ್ದಾರೆ.

ಬೆಂಗಳೂರಿನ ಫ್ರೀಡಂ ಪಾರ್ಕಿನಲ್ಲಿ ನಡೆಯುವ ಹೋರಾಟದಲ್ಲಿ ಸಮುದಾಯದ ಎಲ್ಲ ಉಪ ಜಾತಿಗಳವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಲಿಸಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

<><><><>

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಕಳೆದ ವರ್ಷ ಬಾಲ್ಯ ವಿವಾಹ, ಪೋಕ್ಸೋ ಮತ್ತು ಮಾನವ ಕಳ್ಳ ಸಾಗಾಣಿಕೆ ಪ್ರಕರಣಗಳ ಸಂಖ್ಯೆಯಲ್ಲಿ ಗಣನೀಯ ಏರಿಕೆ ಕಂಡು ಬಂದಿದೆ. ಇವುಗಳೆಲ್ಲವನ್ನೂ ಪರಿಣಾಮಕಾರಿಯಾಗಿ ತಡೆಗಟ್ಟುವ ನಿಟ್ಟಿನಲ್ಲಿ ಸಂಬಂಧಪಟ್ಟ ಕಾವಲು ಪಡೆ ಸಮಿತಿಗಳನ್ನು ಬಲಪಡಿಸುವ ಅಗತ್ಯವಿದೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ತಿಳಿಸಿದ್ದಾರೆ.

ಮಕ್ಕಳ ಮೇಲಾಗುವ ದೌರ್ಜನ್ಯಗಳನ್ನು ತಡೆಗಟ್ಟಿ ಅವರ ಹಕ್ಕುಗಳನ್ನು ರಕ್ಷಿಸಬೇಕು. ಈ ಹಿನ್ನೆಲೆಯಲ್ಲಿ ಕಾವಲು ಪಡೆ ಸಮಿತಿಗಳು ಗ್ರಾಮಗಳಿಗೆ ಭೇಟಿ ನೀಡಿ ಮುನ್ನೆಚ್ಚರಿಕೆ ಕ್ರಮಗಳನ್ನು ಎಲ್ಲಾ ಇಲಾಖೆಗಳ ಸಮನ್ವಯದೊಂದಿಗೆ ತೆಗೆದುಕೊಳ್ಳಬೇಕು ಎಂದು ನಿರ್ದೇಶನ ನೀಡಿದ್ದಾರೆ.

<><><><>

ರಾಜ್ಯದ ವಿವಿಧೆಡೆ ಇಂದು ಹಣಕಾಸು ಸಾಕ್ಷರತಾ ಅಭಿಯಾನ ನಡೆಯಿತು. ಶಿವಮೊಗ್ಗ ಜಿಲ್ಲೆಯ ಕೊಮ್ಮನಾಳು ಗ್ರಾಮಪಂಚಾಯಿತಿಯಲ್ಲಿ ನಡೆದ ಅಭಿಯಾನದಲ್ಲಿ ಜಿಲ್ಲಾ ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಹೇಮಂತ್ ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಟಿಎಬಿ ಬ್ಯಾಂಕಿಂಗ್ ಮೂಲಕ ಖಾತೆ ತೆರೆಯುವ ವ್ಯವಸ್ಥೆ ಮಾಡಲಾಯಿತು. ಪಿಎಂಜೆಜೆಬಿವೈ ಮತ್ತು ಪಿಎಂ ಎಸ್‌ಬಿವೈ ಯೋಜನೆಗಳಡಿಯಲ್ಲಿ ೧೫೦ಕ್ಕೂ ಹೆಚ್ಚು ಅರ್ಜಿಗಳನ್ನು ಸ್ವೀಕರಿಸಲಾಗಿದೆ.

<><><><>

ಭ್ರಷಾಚಾರ ಮುಕ್ತ ಸಮಾಜವನ್ನು ನಿರ್ಮಾಣ ಮಾಡಲು ಸಾರ್ವಜನಿಕರ ಸಹಕಾರ ಅತ್ಯಗತ್ಯ ಎಂದು ಉಪ ಲೋಕಾಯುಕ್ತ ಕೆ.ಎನ್ ಫಣೀಂದ್ರ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ದೂರುಗಳ ವಿಚಾರಣೆ ಹಾಗೂ ಪ್ರಕರಣಗಳ ವಿಲೇವಾರಿ ಸಭೆಯಲ್ಲಿ ಮಾತನಾಡಿದ ಅವರು, ಸಮಾಜವನ್ನು ಭ್ರಷ್ಟಚಾರವನ್ನು ಮುಕ್ತ ಮಾಡಬೇಕು. ಅಧಿಕಾರಿಗಳು ಈ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸಬೇಕು ಎಂದು ಸಲಹೆ ನೀಡಿದ್ದಾರೆ.

<><><><>